**2 ನೇ ಹೆಚ್ಚುವರಿ ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ನಂಜನಗೂಡು.**

**ಸಿ.ಸಿ 8816-2022** **ಸಿ. ಡಬ್ಲ್ಯುಃ 01**

**ಪಿ ಡಬ್ಲ್ಯುಃ 01**

| | |
|---|---|
| ಸಾಕ್ಷಿದಾರರ ಹೆಸರು ವಾಸ | ಮಧುಕೇಶ್ವರ ಹೆಚ್.ಎಂ<br>ನಂಜನಗೂಡು |
| | **ಸತ್ಯ ಪ್ರತಿಜ್ಞೆಯ ಮೇರೆಗೆ ದಿನಾಂಕ 24-09-2024** |

**ಪಾಟೀ ಸವಾಲುಃ ಅರೋಪಿ ಪರ ಶ್ರೀ ಹೆಚ್.ಪಿ.ಎನ್ ವಕೀಲರಿಂದಃ-**

ದಿ.28-05-2021 ರಂದು ನಾವು ಬೆಳಗ್ಗೆ 9.20 ಗಂಟೆಸಮಯಕ್ಕೆ ನಂಜನಗೂಡು-ಹುಲ್ಲಹಳ್ಳಿ ರಸ್ತೆಯಲ್ಲಿ ಕಾರ್ಯಕ್ಕೆ ಹೋಗಿರುತ್ತೇವೆ. ನಾನು ಹೇಳುವಂತೆ ಘಟನಾ ದಿನಾಂಕದಂದು ಘಟನಾ ಸ್ಥಳದಲ್ಲಿ ಇರುವುದಿಲ್ಲ ಹಾಗೂ ಯಾವುದೇ ಗಸ್ತಿಗೆ ಹೋಗಿರುವುದಿಲ್ಲ ಎಂದರೆ ಸರಿಯಲ್ಲ. ಘಟನಾ ಸ್ಥಳದಲ್ಲಿ ಇದ್ದ ಸಾರ್ವಜನಿಕರನ್ನು ಪಂಚರನ್ನಾಗಲು ಕೋರಿರುವುದಿಲ್ಲ ಎಂದರೆ ಸರಿಯಲ್ಲ. ಚಾಸಾ-8 ರವರು ಘಟನಾ ಸ್ಥಳದಲ್ಲಿ ಶೋಧನಾ ವಾರೆಂಟ್ ಅನ್ನು ತಯಾರು ಮಾಡಿರುವುದಿಲ್ಲ, ಅದನ್ನು ಅವರು ಕಚೇರಿಯಲ್ಲಿ ಸೃಷ್ಟಿಸಿರುತ್ತಾರೆ ಎಂದರೆ ಸರಿಯಲ್ಲ. ಆರೋಪಿಯ ಬಳಿ ಯಾವುದೇ ಮದ್ಯದ ಟೆಟ್ರಾ ಪ್ಯಾಕುಗಳು ಇರಲಿಲ್ಲ ಎಂದರೆ ಸರಿಯಲ್ಲ. ಘಟನಾ ಸ್ಥಳದಲ್ಲಿ ಮದ್ಯದ ಟೆಟ್ರಾ ಪ್ಯಾಕಗಳನ್ನು ರಾಸಾಯನಿಕ ಪರೀಕ್ಷೆಗಾಗಿ ತೆಗೆದಿರುವುದಿಲ್ಲ ಎಂದರೆ ಸರಿಯಲ್ಲ. ಘಟನಾ ಸ್ಥಳದಲ್ಲಿ ರಾಸಾಯನಿಕ ಪರೀಕ್ಷೆಗೆಂದು ತೆಗೆದ ಮುದ್ದೆ ಮಾಲುಗಳನ್ನು ಬಿಳಿ ಬಟ್ಟೆ ಚೀಲದಲ್ಲಿ ಹಾಕಿ ಸೀಲು ಮಾಡಿರುವುದಿಲ್ಲ ಅದನ್ನು ಕಚೇರಿಯಲ್ಲಿ ಸೃಷ್ಟಿಸಲಾಗಿರುತ್ತದೆ ಎಂದರೆ

ಸರಿಯಲ್ಲ.   ನಿಪಿ–1 ಮಹಜರ್ ಅನ್ನು ಘಟನಾ ಸ್ಥಳದಲ್ಲಿ ಮಾಡಿರುವುದಿಲ್ಲ ಅದನ್ನು ಠಾಣೆಯಲ್ಲಿಯೇ ಸೃಷ್ಟಿಸಿ, ನಿಪಿ–1 ಕ್ಕೆ ನಾನು ಠಾಣೆಯಲ್ಲಿಯೇ ಸಹಿ ಮಾಡಿರುತ್ತೇನೆ  ಎಂದರೆ ಸರಿಯಲ್ಲ.  ನಿಪಿ–2 ಮತ್ತು 3 ಅನ್ನು ಠಾಣೆಯಲ್ಲಿ ಸೃಷ್ಟಿಸಲಾಗಿದ್ದು, ಅವುಗಳಿಗೂ ಸಹ ನಾನು ಠಾಣೆಯಲ್ಲಿಯೇ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ಈ ಪ್ರಕರಣಕ್ಕೂ, ಮು.ಮಾಗಳಿಗೂ ಹಾಗೂ ಆರೋಪಿಗೂ ಯಾವುದೇ ಸಂಬಂಧ ಇಲ್ಲ ಎಂದರೆ ಸರಿಯಲ್ಲ. ಘಟನಾ ಸಮಯ ಚುನಾವಣಾ ನೀತಿ ಸಂಹಿತೆ ಜಾರಿಯಲ್ಲಿ ಇದ್ದುದ್ದರಿಂದ ನನ್ನ ಮೇಲಾಧಿಕಾರಿಗಳ ಮಾತುಕೇಳಿ ಆರೋಪಿ ಯಾವುದೇ ಅಪರಾಧ ಮಾಡದೇ ಇದ್ದರೂ ಸಹ ಆರೋಪಿ ವಿರುದ್ಧ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನಮ್ಮ ಇಲಾಖಾ ಅಂಕಿ–ಸಂಖ್ಯೆಗಳಿಗೋಸ್ಕರ ಆರೋಪಿ ವಿರುದ್ದ ಸುಳ್ಳು ಪ್ರಕರಣವನ್ನು ದಾಖಲಿಸಿದ್ದು, ಪ್ರಕರಣಕ್ಕೆ ಅನುಕೂಲವಾಗಲಿ ಎಂಬ ಉದ್ದೇಶದಿಂದ ನನ್ನ ಮೇಲಾಧಿಕಾರಿಗಳ ಮಾತುಕೇಳಿ ಆರೋಪಿ ವಿರುದ್ಧ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.ನಾನು ಈ ಪ್ರಕರಣದ ಸಂಬಂಧ ತನಿಖಾಧಿಕಾರಿಗಳ ಮುಂದೆ ಯಾವುದೇ ಹೇಳಿಕೆ ನೀಡಿರುವುದಿಲ್ಲ  ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ**

**(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕೀಕೃತ ಮಾಡಿಸಲಾಯಿತು)**

**ಓ . ಹೇ. ಕೇ. ಸರಿ. ಇದೆ**

**ಸಹಿ/–**

**ಕಿ.ಪ್ರ.ದ. ನ್ಯಾ ದಂ. ನಂಜನಗೂಡು**